Akashvani: Bangalore
National Bulletin In Kannada
05.09.2026: 7.35AM
ಆಕಾಶವಾಣಿ, ಬೆಂಗಳೂರು
ರಾಷ್ಟ್ರೀಯ ವಾರ್ತೆಗಳು
05.09.2026: 7.35AM
**********

**ಮುಖ್ಯಾಂಶಗಳು :**

1. ಇಂದು ಶಿಕ್ಷಕರ ದಿನಾಚರಣೆ; ಶಿಕ್ಷಕರು ತಮ್ಮ ಜ್ಞಾನವನ್ನು ನಿರಂತರವಾಗಿ ನವೀಕರಿಸಿಕೊಳ್ಳಬೇಕು - ರಾಷ್ಟ್ರಪತಿ ದ್ರೌಪದಿ ಮುರ್ಮು
2. ಉಪರಾಷ್ಟ್ರಪತಿ ಸಿ.ಪಿ. ರಾಧಾಕೃಷ್ಣನ್ ಇಂದು ಚೆನ್ನೈ ಭೇಟಿ; ವಿವಿಧ ಕಾರ್ಯಕ್ರಮಗಳಲ್ಲಿ ಭಾಗಿ
3. ನವದೆಹಲಿಯಲ್ಲಿಂದು ಶ್ರೀ ರಾಮ್ ಕಾಲೇಜ್ ಆಫ್ ಕಾಮರ್ಸ್ ಶತಮಾನೋತ್ಸವ ಸಭೆಯನ್ನುದ್ದೇಶಿಸಿ ಪ್ರಧಾನಿ ನರೇಂದ್ರ ಮೋದಿ ಭಾಷಣ
4. ಮುಂಬರುವ ದಿನಗಳಲ್ಲಿ ಭಾರತ, ಕ್ರೀಡಾ ಜಗತ್ತಿನ ಪ್ರಮುಖ ಕೇಂದ್ರವಾಗಿ ಹೊರಹೊಮ್ಮಲಿದೆ - ಅಮಿತ್ ಶಾ
5. ಬ್ಯಾಡ್ಮಿಂಟನ್: ಚೀನಾ ಮಾಸ್ಟರ್ಸ್‌ನ ಸೆಮಿಫೈನಲ್ ಪುರುಷರ ಡಬಲ್ಸ್‌ನಲ್ಲಿಂದು ಭಾರತ-ಮಲೇಷ್ಯಾ ಮುಖಾಮುಖಿ

******

ದೇಶಾದ್ಯಂತ ಇಂದು ಶಿಕ್ಷಕರ ದಿನವನ್ನು ಆಚರಿಸಲಾಗುತ್ತಿದೆ. ಈ ದಿನವು ಹೆಸರಾಂತ ಶಿಕ್ಷಣ ತಜ್ಞ, ಲೇಖಕ, ತತ್ವಜ್ಞಾನಿ ಮತ್ತು ಮಾಜಿ ರಾಷ್ಟ್ರಪತಿ ಡಾ. ಸರ್ವಪಲ್ಲಿ ರಾಧಾಕೃಷ್ಣನ್ ಅವರ ಜನ್ಮ ದಿನಾಚರಣೆಯಾಗಿದೆ. ಈ ದಿನವು ರಾಷ್ಟ್ರ ನಿರ್ಮಾಣದಲ್ಲಿ ಶಿಕ್ಷಕರ ಪ್ರಮುಖ ಪಾತ್ರವನ್ನು ಗುರುತಿಸುತ್ತದೆ. ಈ ಸಂದರ್ಭದಲ್ಲಿ, ರಾಷ್ಟ್ರಪತಿ ದ್ರೌಪದಿ ಮುರ್ಮು ದೇಶಾದ್ಯಂತ ಶಿಕ್ಷಕರಿಗೆ ಶುಭ ಹಾರೈಸಿದ್ದಾರೆ. ಅವರು ಮಾಜಿ ರಾಷ್ಟ್ರಪತಿ ಡಾ. ಸರ್ವಪಲ್ಲಿ ರಾಧಾಕೃಷ್ಣನ್ ಅವರು ಅಸಾಧಾರಣ ಶಿಕ್ಷಕರಾಗಿದ್ದರು ಎಂದು ಬಣ್ಣಿಸಿದ್ದಾರೆ. ಶಿಕ್ಷಕರು ತಮ್ಮ ಮಾರ್ಗದರ್ಶನದ ಮೂಲಕ ಪ್ರತಿಭೆಯನ್ನು ಪೋಷಿಸಿ ವ್ಯಕ್ತಿತ್ವವನ್ನು ಬಲಪಡಿಸುವಲ್ಲಿ ಪ್ರಮುಖ ಪಾತ್ರ ವಹಿಸುತ್ತಾರೆ. ಸಮರ್ಪಿತ ಮತ್ತು ಸಾಮಾಜಿಕ ಕಳಕಳಿಯ ಮನೋಭಾವದ ಶಿಕ್ಷಕರು ವಿದ್ಯಾರ್ಥಿಗಳ ವಿಶಿಷ್ಟ ಸಾಮರ್ಥ್ಯವನ್ನು ಗುರುತಿಸಿ ಅವರಿಗೆ ಸ್ಫೂರ್ತಿ ನೀಡಿ ಶ್ರೇಷ್ಠ ಗುರಿ ಸಾಧಿಸಲು ಅವರನ್ನು ಪ್ರೋತ್ಸಾಹಿಸಬಹುದು ಎಂದು ರಾಷ್ಟ್ರಪತಿ ಹೇಳಿದ್ದಾರೆ. ಇಂದು ಶಿಕ್ಷಕರು ತಮ್ಮ ಜ್ಞಾನವನ್ನು ನಿರಂತರವಾಗಿ ನವೀಕರಿಸಬೇಕಿದ್ದು, ತಂತ್ರಜ್ಞಾನವನ್ನು ಅಳವಡಿಸಿಕೊಳ್ಳುವ ಮೂಲಕ ನವೀನ ಬೋಧನಾ ವಿಧಾನಗಳನ್ನು ಅಳವಡಿಸಿಕೊಳ್ಳಬೇಕು ಎಂದು ಕಿವಿ ಮಾತು ಹೇಳಿದ್ದಾರೆ. ಶಿಕ್ಷಕರು ಸ್ವತಂತ್ರ ಚಿಂತನೆಯನ್ನು ಉತ್ತೇಜಿಸಬೇಕು ಮತ್ತು ವಿದ್ಯಾರ್ಥಿಗಳಲ್ಲಿ ವಿಚಾರಣಾ ಮನೋಭಾವವನ್ನು ಬೆಳೆಸಬೇಕು. ತಮ್ಮ ಸಮರ್ಪಿತ ಕೊಡುಗೆಗಾಗಿ ಎಲ್ಲಾ ಶಿಕ್ಷಕರಿಗೆ ಕೃತಜ್ಞತೆಯನ್ನು ವ್ಯಕ್ತಪಡಿಸಿದ ರಾಷ್ಟ್ರಪತಿಗಳು, ಶಿಕ್ಷಕರು ದೇಶವನ್ನು ಹೆಚ್ಚಿನ ಎತ್ತರಕ್ಕೆ ಕೊಂಡೊಯ್ಯುವ ಪ್ರಬುದ್ಧ ಪೀಳಿಗೆಯನ್ನು ಪೋಷಿಸುವುದನ್ನು ಮುಂದುವರಿಸಬೇಕೆಂದು ಹಾರೈಸಿದರು. ಈ ಸಂದರ್ಭದಲ್ಲಿ, ರಾಷ್ಟ್ರಪತಿ ಮುರ್ಮು ಇಂದು ಬೆಳಿಗ್ಗೆ ನವದೆಹಲಿಯಲ್ಲಿ ೪೮ ಶಾಲಾ ಶಿಕ್ಷಕರಿಗೆ ರಾಷ್ಟ್ರೀಯ ಶಿಕ್ಷಕರ ಪ್ರಶಸ್ತಿಗಳನ್ನು ಪ್ರದಾನ ಮಾಡಲಿದ್ದಾರೆ. ಆಯ್ಕೆಯಾದ ೪೮ ಶಿಕ್ಷಕರು ೨೭ ರಾಜ್ಯಗಳು, ಏಳು ಕೇಂದ್ರಾಡಳಿತ ಪ್ರದೇಶಗಳು ಮತ್ತು ಆರು ಕೇಂದ್ರ ಸರ್ಕಾರಿ ಸಂಸ್ಥೆಗಳಿಂದ ಬಂದಿದ್ದಾರೆ. ರಾಷ್ಟ್ರಪತಿಗಳು ಉನ್ನತ ಶಿಕ್ಷಣ ಸಂಸ್ಥೆಗಳು ಮತ್ತು ಪಾಲಿಟೆಕ್ನಿಕ್‌ಗಳ ೨೧ ಶಿಕ್ಷಕರು ಮತ್ತು ಅಧ್ಯಾಪಕ ಸದಸ್ಯರಿಗೆ ರಾಷ್ಟ್ರೀಯ ಪ್ರಶಸ್ತಿಗಳನ್ನು ಪ್ರದಾನ ಮಾಡಲಿದ್ದಾರೆ.

******

ಉಪರಾಷ್ಟ್ರಪತಿ ಸಿ.ಪಿ. ರಾಧಾಕೃಷ್ಣನ್ ಅವರು ಇಂದು ಚೆನ್ನೈಗೆ ಒಂದು ದಿನದ ಭೇಟಿ ನೀಡಲಿದ್ದಾರೆ. ಭೇಟಿಯ ಸಮಯದಲ್ಲಿ ಅವರು, ಇಂಡಿಯಾ ವಾಲ್ವ್ಸ್-೨೦೨೬ರಲ್ಲಿ ಭಾಗವಹಿಸಲಿದ್ದಾರೆ, ಇದು ಹೃದಯ ಕಾಯಿಲೆಗಳ ಚಿಕಿತ್ಸೆಯನ್ನು ಮುಂದುವರೆಸುವತ್ತ ಗಮನಹರಿಸುವ ರಾಷ್ಟ್ರೀಯ ಶೈಕ್ಷಣಿಕ ಸಭೆಯಾಗಿದೆ. ಚೆನ್ನೈನ ಗಿಂಡಿಯಲ್ಲಿ ಇಂಡಿಯಾ ವಾಲ್ವ್ ರಿಜಿಸ್ಟ್ರಿಯನ್ನು ಸಹ ಉಪರಾಷ್ಟ್ರಪತಿ ಉದ್ಘಾಟಿಸಲಿದ್ದಾರೆ. ದಿನಮಲರ್ ಪತ್ರಿಕೆಯ ಪ್ರಕಟಣೆಯ ೭೫ನೇ ವರ್ಷವನ್ನು ಗುರುತಿಸುವ ಸ್ಮರಣಾರ್ಥ ಅಂಚೆ ಚೀಟಿಯನ್ನು ಚೆನ್ನೈನ ವಲ್ಲುವರ್ ಕೊಟ್ಟಂನಲ್ಲಿ ಬಿಡುಗಡೆ ಮಾಡುವ ಸಮಾರಂಭದಲ್ಲಿ ಅವರು ಭಾಗವಹಿಸಲಿದ್ದಾರೆ.

******

ಪ್ರಧಾನಿ ನರೇಂದ್ರ ಮೋದಿ ಇಂದು ನವದೆಹಲಿಯಲ್ಲಿ ನಡೆಯಲಿರುವ ಶ್ರೀ ರಾಮ್ ಕಾಲೇಜ್ ಆಫ್ ಕಾಮರ್ಸ್‌ನ ಶತಮಾನೋತ್ಸವ ಸಮಾರಂಭದಲ್ಲಿ ಭಾಗವಹಿಸಲಿದ್ದಾರೆ. ಈ ಸಂದರ್ಭದಲ್ಲಿ ಅವರು ಸಭೆಯನ್ನುದ್ದೇಶಿಸಿ ಮಾತನಾಡಲಿದ್ದಾರೆ. ದೆಹಲಿ ವಿಶ್ವವಿದ್ಯಾಲಯದ ಭಾಗವಾಗಿರುವ ಶ್ರೀ ರಾಮ್ ಕಾಲೇಜ್ ಆಫ್ ಕಾಮರ್ಸ್ ಭಾರತದ ಪ್ರಮುಖ ಉನ್ನತ ಶಿಕ್ಷಣ ಸಂಸ್ಥೆಗಳಲ್ಲಿ ಒಂದಾಗಿದೆ. ಇದು ವಾಣಿಜ್ಯ, ಅರ್ಥಶಾಸ್ತ್ರ ಮತ್ತು ನಿರ್ವಹಣೆಯಲ್ಲಿ ಒಂದು ವಿಶಿಷ್ಟ ಕಲಿಕಾ ಕೇಂದ್ರವಾಗಿದೆ. ೧೯೨೬ರಲ್ಲಿ ಖ್ಯಾತ ಕೈಗಾರಿಕೋದ್ಯಮಿ ಮತ್ತು ಲೋಕೋಪಕಾರಿ ಸರ್ ಶ್ರೀ ರಾಮ್ ಅವರು ಸ್ಥಾಪಿಸಿದ ಈ ಕಾಲೇಜು, ಕಳೆದ ಶತಮಾನದಲ್ಲಿ, ವಿದ್ವಾಂಸರು, ವೃತ್ತಿಪರರು, ಆಡಳಿತಗಾರರು, ಉದ್ಯಮಿಗಳು, ನೀತಿ ನಿರೂಪಕರು ಮತ್ತು ರಾಷ್ಟ್ರನಿರ್ಮಾಪಕರ ಪೀಳಿಗೆಯನ್ನು ಪೋಷಿಸಿದೆ. ಶತಮಾನೋತ್ಸವ ಆಚರಣೆಗಳು ಶಿಕ್ಷಕರ ದಿನದಂದು ಹೊಂದಿಕೆಯಾಗುತ್ತವೆ. ಪೀಳಿಗೆಗಳನ್ನು ರೂಪಿಸುವಲ್ಲಿ ಮತ್ತು ಸಮಾಜದ ಅಡಿಪಾಯವನ್ನು ಬಲಪಡಿಸುವಲ್ಲಿ ಶಿಕ್ಷಕರು ಮತ್ತು ಶಿಕ್ಷಕರ ಕೊಡುಗೆಯನ್ನು ರಾಷ್ಟ್ರವು ಗೌರವಿಸುವುದರಿಂದ ಈ ಸಂದರ್ಭವನ್ನು ವಿಶೇಷವಾಗಿ ಮಹತ್ವದ್ದಾಗಿ ಆಚರಣೆ ಮಾಡುತ್ತದೆ.

******

ಬೆಲ್ಜಿಯಂ ಭಾರತದೊಂದಿಗೆ ಕಡಲ ಸಹಕಾರವನ್ನು ಬಲಪಡಿಸುವ ನಿಟ್ಟಿನಲ್ಲಿ ಕೆಲಸ ಮಾಡಲಿದೆ ಎಂದು ಬೆಲ್ಜಿಯಂ ಪ್ರಧಾನಿ ಬಾರ್ಟ್ ಡಿ ವೆವರ್ ಹೇಳಿದ್ದಾರೆ. ಮುಂದಿನ ವರ್ಷ ಫೆಬ್ರವರಿಯಲ್ಲಿ ಸಮುದ್ರ ಮತ್ತು ಬಂದರು ವಲಯದ ಪೂರ್ಣ ಬೆಲ್ಜಿಯಂ ನಿಯೋಗವು ಭಾರತಕ್ಕೆ ಭೇಟಿ ನೀಡಲಿದೆ ಎಂದು ಘೋಷಿಸಿದ್ದಾರೆ. ನಿನ್ನೆ ಮುಂಬೈನಲ್ಲಿ ನಡೆದ ಭಾರತ-ಯುರೋಪಿಯನ್ ಒಕ್ಕೂಟ ಮುಕ್ತ ವ್ಯಾಪಾರ ಒಪ್ಪಂದದ ಕುರಿತು ಭಾರತ-ಬೆಲ್ಜಿಯಂ ಉನ್ನತ ಮಟ್ಟದ ಚರ್ಚೆಗಳನ್ನು ಉದ್ದೇಶಿಸಿ ಅವರು ಮಾತನಾಡಿದರು. ಮುಕ್ತ ವ್ಯಾಪಾರ ಒಪ್ಪಂದವು ಕಾರ್ಯತಂತ್ರದ ಮುಕ್ತತೆ, ನಂಬಿಕೆ ಮತ್ತು ಪರಸ್ಪರ ಗೌರವದ ಸಂಕೇತವಾಗಿದೆ. ಜೊತೆಗೆ ಇದು ಭಾರತ ಮತ್ತು ಯುರೋಪಿಯನ್ ಒಕ್ಕೂಟದ ಆರ್ಥಿಕತೆಗಳನ್ನು ಮತ್ತಷ್ಟು ಬಲಪಡಿಸುತ್ತದೆ. ಜಾಗತಿಕ ಅನಿಶ್ಚಿತತೆಯ ನಡುವೆ ಅವು ಸ್ಥಿತಿಸ್ಥಾಪಕತ್ವವನ್ನು ಉಳಿಸಿಕೊಳ್ಳಲು ಸಹಾಯ ಮಾಡುತ್ತದೆ ಎಂಬ ವಿಶ್ವಾಸವನ್ನು ವ್ಯಕ್ತಪಡಿಸಿದರು.

******

ಭಾರತವನ್ನು ವಿಶ್ವದ ಅತಿದೊಡ್ಡ ಕ್ರೀಡಾ ಕೇಂದ್ರವನ್ನಾಗಿ ಮಾಡುವತ್ತ ದೇಶ ಮುನ್ನಡೆಯುತ್ತಿದೆ ಎಂದು ಕೇಂದ್ರ ಗೃಹ ಸಚಿವ ಅಮಿತ್ ಶಾ ಹೇಳಿದ್ದಾರೆ. ನವದೆಹಲಿಯಿಂದ ವಿಡಿಯೋ ಕಾನ್ಫರೆನ್ಸಿಂಗ್ ಮೂಲಕ ಗುಜರಾತ್‌ನ ಅಹಮದಾಬಾದ್‌ನಲ್ಲಿ ನಡೆದ ವಿಶ್ವ ಬಿಲ್ಲುಗಾರಿಕೆ ಪ್ಯಾರಾ ಸರಣಿಯ ಉದ್ಘಾಟನಾ ಸಮಾರಂಭದಲ್ಲಿ ಮಾತನಾಡಿದ ಸಚಿವರು, ಮುಂಬರುವ ದಿನಗಳಲ್ಲಿ ಭಾರತ ಕ್ರೀಡಾ ಜಗತ್ತಿನ ಪ್ರಮುಖ ಕೇಂದ್ರವಾಗಿ ಹೊರಹೊಮ್ಮಲಿದೆ. ಭಾರತವು ಎಲ್ಲಾ ರೀತಿಯ ಕ್ರೀಡೆಗಳಲ್ಲಿ ತರಬೇತಿ ನೀಡುವ ಜೊತೆಗೆ ಕ್ರೀಡಾ ಸೌಲಭ್ಯಗಳು ಮತ್ತು ಸಲಕರಣೆಗಳ ಉತ್ಪಾದನಾ ಕೇಂದ್ರವಾಗಲಿದೆ ಎಂದು ಹೇಳಿದರು. ಗರಿಷ್ಠ ಸಂಖ್ಯೆಯ ಪದಕಗಳನ್ನು ಗೆಲ್ಲುವುದು ಮಾತ್ರವಲ್ಲ, ಒಲಿಂಪಿಕ್ಸ್, ಏಷ್ಯನ್ ಕ್ರೀಡಾಕೂಟ, ಕಾಮನ್‌ವೆಲ್ತ್ ಕ್ರೀಡಾಕೂಟ, ಪೊಲೀಸ್ ಕ್ರೀಡಾಕೂಟ ಮತ್ತು ಇತರ ಸ್ಪರ್ಧೆಗಳಲ್ಲಿ ಒಳಗೊಂಡಿರುವ ಎಲ್ಲಾ ಕ್ರೀಡೆಗಳನ್ನು ಬಲಪಡಿಸುವ ಗುರಿಯನ್ನು ಸರ್ಕಾರ ಹೊಂದಿದೆ ಎಂದು ಸಚಿವರು ತಿಳಿಸಿದರು. ಭೂತಾನ್, ಯುನೈಟೆಡ್ ಕಿಂಗ್‌ಡಮ್, ಚೀನಾ, ಬಾಂಗ್ಲಾದೇಶ, ಫ್ರಾನ್ಸ್, ಜರ್ಮನಿ, ಇಂಡೋನೇಷ್ಯಾ ಮತ್ತು ಯುನೈಟೆಡ್ ಸ್ಟೇಟ್ಸ್ ಸೇರಿದಂತೆ ೧೯ ದೇಶಗಳ ಕ್ರೀಡಾಪಟುಗಳು ಈ ಕ್ರೀಡಾಕೂಟಗಳಲ್ಲಿ ಭಾಗವಹಿಸುತ್ತಿದ್ದಾರೆ. ೨೦೩೦ರ ಕಾಮನ್‌ವೆಲ್ತ್ ಕ್ರೀಡಾಕೂಟವು ಶತಮಾನೋತ್ಸವ ಆಚರಿಸಲಿದ್ದು, ಆ ಕಾರ್ಯಕ್ರಮವನ್ನು ಅಹಮದಾಬಾದ್ ಆಯೋಜಿಸಲಿದೆ ಎಂದು ತಿಳಿಸಿದರು.

******

ನೇಪಾಳದ ಪ್ರವಾಹ ಪೀಡಿತ ತ್ರಿಶೂಲಿ ಬಜಾರ್ ಪ್ರದೇಶದಿಂದ ಐದು ವರ್ಷದ ಮಗು ಸೇರಿದಂತೆ ಮತ್ತೆ ಮೂವರು ಭಾರತೀಯ ಪ್ರಜೆಗಳನ್ನು ರಕ್ಷಿಸಲಾಗಿದೆ. ಇದರಿಂದ ರಕ್ಷಿಸಿ ಸ್ಥಳಾಂತರಿಸಲಾದ ಭಾರತೀಯರ ಒಟ್ಟು ಸಂಖ್ಯೆ ೧೯೯ಕ್ಕೆ ಏರಿಕೆಯಾಗಿದೆ ಎಂದು ವಿದೇಶಾಂಗ ಸಚಿವಾಲಯ ತಿಳಿಸಿದೆ. ನವದೆಹಲಿಯಲ್ಲಿ ನಿನ್ನೆ ಸುದ್ದಿಗೋಷ್ಠಿಯಲ್ಲಿ ಭಾರತೀಯ ಪ್ರಜೆಗಳ ಸುರಕ್ಷತೆ ಕುರಿತು ಮಾಹಿತಿ ನೀಡಿದ ವಿದೇಶಾಂಗ ಸಚಿವಾಲಯದ ವಕ್ತಾರ ರಣಧೀರ್ ಜೈಸ್ವಾಲ್, ೨೭೫ ಭಾರತೀಯ ಪ್ರಜೆಗಳು ಇನ್ನೂ ನಾಪತ್ತೆಯಾಗಿದ್ದಾರೆ ಎಂದು ತಿಳಿಸಿದ್ದಾರೆ. ಚೀನಾದಿಂದ ನೇಪಾಳಕ್ಕೆ ೧ ಸಾವಿರದ ೯೦೭ ಭಾರತೀಯರು ಸುರಕ್ಷಿತವಾಗಿ ಗಡಿ ದಾಟಿದ್ದಾರೆ ಎಂದು ಅವರು ಹೇಳಿದ್ದಾರೆ. ಕಠ್ಮಂಡುವಿನಲ್ಲಿರುವ ಭಾರತೀಯ ರಾಯಭಾರ ಕಚೇರಿ, ರಕ್ಷಿಸಿ ಸ್ಥಳಾಂತರಿಸಲಾದ ಭಾರತೀಯರನ್ನು ವಿಮಾನಗಳ ಮೂಲಕ ತವರಿಗೆ

ಕಳುಹಿಸಲು ವ್ಯವಸ್ಥೆ ಮಾಡುತ್ತಿದೆ ಎಂದು ಜೈಸ್ವಾಲ್ ತಿಳಿಸಿದ್ದಾರೆ. ಟಿಬೆಟಿಯನ್ ಸ್ವಾಯತ್ತ ಪ್ರದೇಶದಲ್ಲಿ ಯಾವುದೇ ಭಾರತೀಯ ಪ್ರಯಾಣಿಕರು ಸಿಲುಕಿಕೊಂಡಿಲ್ಲ ಎಂದು ಅವರು ಸ್ಪಷ್ಟಪಡಿಸಿದ್ದಾರೆ. ಭಾರತವು ನೇಪಾಳಕ್ಕೆ ಸುಮಾರು ೯೫ ಟನ್ ಪರಿಹಾರ ಸಾಮಗ್ರಿಗಳನ್ನು ಪೂರೈಸಿದೆ ನೇಪಾಳ ಸರ್ಕಾರದ ಅಗತ್ಯಕ್ಕೆ ಅನುಗುಣವಾಗಿ ಭಾರತ ಮುಂದೆಯೂ ನೆರವು ನೀಡಲಿದೆ. ಮುಂಬರುವ ದಿನಗಳಲ್ಲಿ ನೇಪಾಳ ಸರ್ಕಾರ ಕೋರಿರುವ ಹೆಚ್ಚಿನ ಸಂಖ್ಯೆಯ ವಿಧಿವಿಜ್ಞಾನ ಕಿಟ್‌ಗಳು ಮತ್ತು ಇತರ ಸಾಮಗ್ರಿಗಳನ್ನು ಕಳುಹಿಸಲು ಭಾರತ ಯೋಜಿಸುತ್ತಿದೆ ಎಂದು ವಿದೇಶಾಂಗ ಸಚಿವಾಲಯದ ವಕ್ತಾರರು ತಿಳಿಸಿದ್ದಾರೆ.

******

ರಾಷ್ಟ್ರೀಯ ಪರೀಕ್ಷಾ ಸಂಸ್ಥೆ- ಎನ್‌ಟಿಎ, ಜೂನ್ ೨೦೨೪ರ ಯುಜಿಸಿ-ನೆಟ್ ಪರೀಕ್ಷೆಯಡಿ ಇಂಗ್ಲಿಷ್, ವಾಣಿಜ್ಯ ಮತ್ತು ಸಮಾಜಶಾಸ್ತ್ರ ವಿಷಯಗಳ ಪರೀಕ್ಷೆಗೆ ಹಾಜರಾಗುವ ಅಭ್ಯರ್ಥಿಗಳ ಪ್ರವೇಶ ಪತ್ರಗಳನ್ನು ಬಿಡುಗಡೆ ಮಾಡಿದೆ. ಈ ಪರೀಕ್ಷೆಗಳು ಇದೇ ತಿಂಗಳ ೯ ಮತ್ತು ೧೦ರಂದು ನಡೆಯಲಿವೆ. ಅಭ್ಯರ್ಥಿಗಳು ತಮ್ಮ ಲಾಗಿನ್ ವಿವರಗಳನ್ನು ಬಳಸಿ ugcnet.ta.nic.in ಜಾಲತಾಣದಿಂದ ಪ್ರವೇಶ ಪತ್ರಗಳನ್ನು ಡೌನ್‌ಲೋಡ್ ಮಾಡಿಕೊಳ್ಳಬಹುದು. ಇಂಗ್ಲಿಷ್, ವಾಣಿಜ್ಯ ಮತ್ತು ಸಮಾಜಶಾಸ್ತ್ರ ಈ ಮೂರು ವಿಷಯಗಳ ಪ್ರಶ್ನೆಪತ್ರಿಕೆಗಳಲ್ಲಿ ಹಲವು ದೋಷಗಳಿರುವ ಬಗ್ಗೆ ದೂರುಗಳು ಬಂದ ಹಿನ್ನೆಲೆಯಲ್ಲಿ, ರಾಷ್ಟ್ರೀಯ ಪರೀಕ್ಷಾ ಸಂಸ್ಥೆ ಈ ವಿಷಯಗಳಿಗೆ ಮರುಪರೀಕ್ಷೆ ನಡೆಸುವುದಾಗಿ ಪ್ರಕಟಿಸಿದೆ. ಇಂಗ್ಲಿಷ್ ವಿಷಯದ ಪರೀಕ್ಷೆ ಇದೇ ೯ರಂದು ಬೆಳಿಗ್ಗೆ ೯ರಿಂದ ಮಧ್ಯಾಹ್ನ ೧೨ರವರೆಗೆ ಮೊದಲ ಪಾಳಿಯಲ್ಲಿ ನಡೆಯಲಿದೆ. ವಾಣಿಜ್ಯ ವಿಷಯದ ಪರೀಕ್ಷೆ ಅಂದೇ ಮಧ್ಯಾಹ್ನ ೩ರಿಂದ ಸಂಜೆ ೪ರವರೆಗೆ ಎರಡನೇ ಪಾಳಿಯಲ್ಲಿ ನಡೆಯಲಿದೆ. ಸಮಾಜಶಾಸ್ತ್ರ ವಿಷಯದ ಪರೀಕ್ಷೆ ಇದೇ ೧೦ರಂದು ಬೆಳಿಗ್ಗೆ ೯ ರಿಂದ ಮಧ್ಯಾಹ್ನ ೧೨ರವರೆಗೆ ಮೊದಲ ಪಾಳಿಯಲ್ಲಿ ನಡೆಯಲಿದೆ.

******

ಬ್ಯಾಡ್ಮಿಂಟನ್‌ನಲ್ಲಿ, ಭಾರತದ ಪುರುಷರ ಡಬಲ್ಸ್ ಜೋಡಿ ಸಾತ್ವಿಕ್‌ಸಾಯಿರಾಜ್ ರಾಂಕಿರೆಡ್ಡಿ ಮತ್ತು ಚಿರಾಗ್ ಶೆಟ್ಟಿ ಇಂದು ಶೆನ್ಜೆನ್‌ನಲ್ಲಿ ನಡೆಯುವ ಚೀನಾ ಮಾಸ್ಟರ್ಸ್‌ನ ಸೆಮಿಫೈನಲ್‌ನಲ್ಲಿ ಮಲೇಷ್ಯಾದ ಜೋಡಿ ನೂರ್ ಮೊಹಮ್ಮದ್ ಅಜ್ರಿನ್ ಅಯೂಬ್ ಮತ್ತು ಟಾನ್ ವೀ ಕಿಯೊಂಗ್ ಅವರನ್ನು ಎದುರಿಸಲಿದ್ದಾರೆ. ನಿನ್ನೆ ನಡೆದ ಕ್ವಾರ್ಟರ್ ಫೈನಲ್‌ನಲ್ಲಿ ಭಾರತೀಯ ಜೋಡಿ ಡೆನ್ಮಾರ್ಕ್‌ನ ಕಿಮ್ ಅಸ್ಟ್ರುಪ್ ಮತ್ತು ಆಂಡರ್ಸ್ ಸ್ಕಾರಪ್ ರಾಸ್ಮುಸ್ಸೆನ್ ಅವರನ್ನು ೨೧-೧೩, ೧೪-೨೧, ೨೧-೧೮ ಅಂತರದಿಂದ ಪರಾಭವಗೊಳಿಸಿತು. ಈ ಗೆಲುವಿನೊಂದಿಗೆ, ಸಾತ್ವಿಕ್ ಮತ್ತು ಚಿರಾಗ್ ಸತತ ನಾಲ್ಕನೇ ಬಾರಿಗೆ ಚೀನಾ ಮಾಸ್ಟರ್ಸ್‌ನ ಸೆಮಿಫೈನಲ್ ತಲುಪಿದರು.

******

ಉಕ್ರೇನ್ ಮತ್ತು ರಷ್ಯಾ ನಡುವಿನ ಸಂಘರ್ಷವನ್ನು ತಗ್ಗಿಸಲು ಅಥವಾ ಕೊನೆಗೊಳಿಸಲು ಸಹಾಯ ಮಾಡುವ ವಿಚಾರಗಳು ಮತ್ತು ಸಲಹೆಗಳನ್ನು ನವದೆಹಲಿ ಅನ್ವೇಷಿಸುತ್ತಿದೆ. ಈ ದಿಸೆಯಲ್ಲಿ ಉಕ್ರೇನ್ ಮತ್ತು ರಷ್ಯಾ ಎರಡರೊಂದಿಗೂ ಭಾರತ ನಿರಂತರ ಸಂಪರ್ಕದಲ್ಲಿದೆ ಎಂದು ವಿದೇಶಾಂಗ ವ್ಯವಹಾರಗಳ ಸಚಿವ ಎಸ್. ಜೈಶಂಕರ್ ಹೇಳಿದ್ದಾರೆ.

***END***